Akashvani : Bangalore
National Bulletin In Kannada
08.06.2024 / 7.35AM
**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

08.06.2024 / 7.35AM

*****

**ಮುಖ್ಯಾಂಶಗಳು:**

1. ರಾಷ್ಟ್ರಪತಿ ದ್ರೌಪದಿ ಮುರ್ಮು ಅವರನ್ನು ಭೇಟಿಯಾಗಿ ಸರ್ಕಾರ ರಚನೆಗೆ ಹಕ್ಕು ಮಂಡಿಸಿದ ನಿಯೋಜಿತ ಪ್ರಧಾನಿ
2. ಸತತ ಮೂರನೇ ಅವಧಿಗೆ ಪ್ರಧಾನಿಯಾಗಿ ನಾಳೆ ನರೇಂದ್ರ ಮೋದಿ ಪ್ರಮಾಣವಚನ ಸ್ವೀಕಾರ
3. ಫ್ರೆಂಚ್ ಓಪನ್ ಟೆನಿಸ್; ಇಂದು ನಡೆಯಲಿರುವ ಮಹಿಳೆಯರ ಸಿಂಗಲ್ಸ್ ವಿಭಾಗದ ಫೈನಲ್‌ನಲ್ಲಿ ಇಗಾ ಸ್ವಿಯಾಟೆಕ್ - ಜಾಸ್ಮಿನ್ ಪಯೋಲಿನಿ ಮುಖಾಮುಖಿ
4. ಟಿ-೨೦ ವಿಶ್ವಕಪ್: ಐರ್ಲೆಂಡ್ ವಿರುದ್ಧ ಕೆನಡಾಗೆ ಗೆಲುವು

*****

ನಿಯೋಜಿತ ಪ್ರಧಾನಿ ನರೇಂದ್ರ ಮೋದಿ ಅವರು ನಿನ್ನೆ ಸಂಜೆ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರನ್ನು ಭೇಟಿಯಾಗಿ ಸರ್ಕಾರ ರಚನೆಗೆ ಹಕ್ಕು ಮಂಡಿಸಿದರು. ಭಾನುವಾರ ಸಂಜೆ ರಾಷ್ಟ್ರಪತಿ ಭವನದಲ್ಲಿ ಪ್ರಮಾಣ ವಚನ ಸ್ವೀಕಾರ ಸಮಾರಂಭ ನಡೆಯಲಿದ್ದು, ರಾತ್ರಿ ೭.೧೫ಕ್ಕೆ ರಾಷ್ಟ್ರಪತಿಗಳು ನರೇಂದ್ರ ಮೋದಿ ಮತ್ತು ಅವರ ನೂತನ ಸಚಿವ ಸಂಪುಟಕ್ಕೆ ಪ್ರಮಾಣ ವಚನ ಬೋಧಿಸಲಿದ್ದಾರೆ. ಇದಕ್ಕೂ ಮುನ್ನ ನಿನ್ನೆ ಬಿಜೆಪಿ ಅಧ್ಯಕ್ಷ ಜೆ.ಪಿ.ನಡ್ಡಾ ನೇತೃತ್ವದ ಎನ್‌ಡಿಎ ನಿಯೋಗವೂ ರಾಷ್ಟ್ರಪತಿ ಅವರನ್ನು ಭೇಟಿ ಮಾಡಿ, ಬಿಜೆಪಿ ಸಂಸದೀಯ ಪಕ್ಷದ ನಾಯಕರಾಗಿ ನರೇಂದ್ರ ಮೋದಿ ಅವರನ್ನು ಆಯ್ಕೆ ಮಾಡಲಾಗಿದೆ ಎಂಬ ಪತ್ರವನ್ನು ಸಲ್ಲಿಸಿತು. ಎನ್‌ಡಿಎ ಮೈತ್ರಿಕೂಟದ ಪಕ್ಷಗಳ ಬೆಂಬಲ ಪತ್ರವನ್ನೂ ರಾಷ್ಟ್ರಪತಿಗಳಿಗೆ ಹಸ್ತಾಂತರಿಸಲಾಯಿತು.

ರಾಷ್ಟ್ರಪತಿ ಭವನದ ಹೊರಗೆ ಮಾತನಾಡಿದ ನಿಯೋಜಿತ ಪ್ರಧಾನಿ ನರೇಂದ್ರ ಮೋದಿ,

ಎನ್‌ಡಿಎ ಪ್ರಬಲ, ಸ್ಥಿರ ಮತ್ತು ಬೆಳವಣಿಗೆ ಆಧಾರಿತ ಸರ್ಕಾರವನ್ನು ರಚಿಸಲಿದೆ ಎಂದು ಹೇಳಿದರು.

ರಾಷ್ಟ್ರಪತಿ ಭವನವು ಪ್ರಮಾಣವಚನ ಸಮಾರಂಭದ ಕಾರ್ಯಕ್ರಮವನ್ನು ರೂಪಿಸಲಿದ್ದು, ಅಷ್ಟರೊಳಗೆ ಮಂತ್ರಿಮಂಡಲದ ಪಟ್ಟಿಯನ್ನು ರಾಷ್ಟ್ರಪತಿಗಳಿಗೆ ಹಸ್ತಾಂತರಿಸಲಾಗುವುದು ಎಂದು ಅವರು ತಿಳಿಸಿದರು. ಜನರು ಎನ್‌ಡಿಎ ಸರ್ಕಾರಕ್ಕೆ ಮತ್ತೊಂದು ಅವಕಾಶ ನೀಡಿದ್ದಾರೆ. ೧೮ನೇ ಲೋಕಸಭೆಯು ಹೊಸ ಮತ್ತು ಯುವ ಶಕ್ತಿಯ ಸದನವಾಗಿದೆ. ತಮ್ಮ ಸರ್ಕಾರ ದೇಶದ ಜನರ ಆಶಯ ಮತ್ತು ಆಕಾಂಕ್ಷೆಗಳನ್ನು ಈಡೇರಿಸಲಿದೆ ಎಂದು ನರೇಂದ್ರ ಮೋದಿ ಹೇಳಿದರು.

ಸ್ಥಿರ ಸರ್ಕಾರವು ಭಾರತ ಮತ್ತು ಅದರ ಆರ್ಥಿಕತೆ ಮತ್ತು ಯುವಜನತೆಗೆ ಪ್ರಯೋಜನಕಾರಿ ಎಂದು ಸಾಬೀತುಪಡಿಸುತ್ತದೆ. ರಾಷ್ಟ್ರವನ್ನು ತ್ವರಿತಗತಿಯಲ್ಲಿ ಅಭಿವೃದ್ಧಿಪಡಿಸಲು ತಮ್ಮ ಸರ್ಕಾರ ಯಾವುದೇ ಅವಕಾಶವನ್ನು ಕೈಬಿಡುವುದಿಲ್ಲ ಎಂದು ಅವರು ಭರವಸೆ ನೀಡಿದರು. ಮತ್ತೊಂದೆಡೆ, ಸಂವಿಧಾನದ ೭೫ನೇ ವಿಧಿಯ ಅಡಿಯಲ್ಲಿ ತನ್ನಲ್ಲಿರುವ ಅಧಿಕಾರವನ್ನು ಚಲಾಯಿಸುವ ಮೂಲಕ ಭಾರತದ ಪ್ರಧಾನಮಂತ್ರಿಯಾಗಿ ನರೇಂದ್ರ ಮೋದಿ ಅವರನ್ನು ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ನಿಯೋಜಿಸಿದ್ದಾರೆ ಎಂದು ರಾಷ್ಟ್ರಪತಿ ಭವನ ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ತಿಳಿಸಿದೆ.

*****

ಇದಕ್ಕೂ ಮುನ್ನ ನರೇಂದ್ರ ಮೋದಿ ಅವರು, ಲೋಕಸಭೆಯಲ್ಲಿ ಎನ್‌ಡಿಎ ಸಂಸದೀಯ ಪಕ್ಷದ ನಾಯಕರಾಗಿ ಆಯ್ಕೆಯಾದರು. ಮೋದಿಯವರ ಹೆಸರನ್ನು ಸೂಚಿಸಿದ ರಾಜನಾಥ್ ಸಿಂಗ್, ಈ ಹುದ್ದೆಗೆ ಮೋದಿ ಅವರೇ ಸೂಕ್ತ ವ್ಯಕ್ತಿಯಾಗಿದ್ದಾರೆ ಎಂದು ಹೇಳಿದ್ದಾರೆ. ರಾಜನಾಥ್ ಸಿಂಗ್ ಅವರು, ಮಂಡಿಸಿದ ಸೂಚನೆಗೆ ಕೇಂದ್ರ ಸಚಿವರಾದ ಅಮಿತ್ ಶಾ ಮತ್ತು ನಿತಿನ್ ಗಡ್ಕರಿ ಅನುಮೋದನೆ ನೀಡಿದ್ದಾರೆ. ಈ ವೇಳೆ ಟಿಡಿಪಿ ಮುಖ್ಯಸ್ಥ ಎನ್.ಚಂದ್ರಬಾಬು ನಾಯ್ಡು ಮಾತನಾಡಿ, ನರೇಂದ್ರ ಮೋದಿ ಅವರ ದೂರದರ್ಶಿತ್ವದ ನಾಯಕತ್ವದಲ್ಲಿ ಕಳೆದ ಹತ್ತು ವರ್ಷಗಳ ಅವಧಿಯಲ್ಲಿ ಹಲವಾರು ಪ್ರಮುಖ ಉಪಕ್ರಮಗಳನ್ನು ಎನ್‌ಡಿಎ ಸರ್ಕಾರ ಕೈಗೊಂಡಿದೆ ಎಂದು ಹೇಳಿದ್ದಾರೆ.ಈ ಅವಧಿಯಲ್ಲಿ ದೇಶ, ದಾಖಲೆ ಎನಿಸಬಹುದಾದ ಪ್ರಗತಿ ಹಾಗೂ ಬದಲಾವಣೆಯನ್ನು ಕಂಡಿದೆ. ಸೂಕ್ತ ಕಾಲದಲ್ಲಿ ಸೂಕ್ತ ನಾಯಕನನ್ನು ಭಾರತ ಹೊಂದಿದ್ದು, ಅವರೇ ನರೇಂದ್ರ ಮೋದಿಯವರಾಗಿದ್ದಾರೆ ಎಂದು ಚಂದ್ರಬಾಬು ನಾಯ್ಡು ಹೇಳಿದ್ದಾರೆ. ನರೇಂದ್ರ ಮೋದಿ ಅವರಿಗೆ ಬೆಂಬಲ ಸೂಚಿಸಿ

ಮಾತನಾಡಿದ ಬಿಹಾರದ ಮುಖ್ಯಮಂತ್ರಿ ಹಾಗೂ ಜೆಡಿಯು ನಾಯಕ ನಿತೀಶ್ ಕುಮಾರ್, ಮೋದಿ ಅವರ ನಾಯಕತ್ವದಲ್ಲಿ ನಾವೆಲ್ಲಾ ಒಗ್ಗಟ್ಟಿನಿಂದ ಕೆಲಸ ಮಾಡುತ್ತೇವೆ. ಮೋದಿಯವರು ದೇಶಕ್ಕಾಗಿ ಸೇವೆ ಸಲ್ಲಿಸಿದ್ದಾರೆ. ಮೂರನೇ ಅವಧಿಯನ್ನು ಯಾವುದೇ ಅಡೆ-ತಡೆ ಇಲ್ಲದೆ ಪೂರೈಸಲಿದ್ದಾರೆ ಎಂಬ ವಿಶ್ವಾಸ ವ್ಯಕ್ತಪಡಿಸಿದ್ದಾರೆ.ಮಹಾರಾಷ್ಟ್ರದ ಮುಖ್ಯಮಂತ್ರಿ ಮತ್ತು ಶಿವಸೇನೆಯ ಶಿಂಧೆ ಬಣದ ನಾಯಕ ಏಕನಾಥ್ ಶಿಂಧೆ, ಎಲ್‌ಜೆಪಿ ರಾಮ್‌ವಿಲಾಸ್ ಬಣದ ಮುಖ್ಯಸ್ಥ ಚಿರಾಂಗ್ ಪಾಸ್ವಾನ್, ಎನ್‌ಸಿಪಿ ನಾಯಕ ಅಜಿತ್ ಪವಾರ್, ಜನಸೇನಾ ಮುಖ್ಯಸ್ಥ ಪವನ್ ಕಲ್ಯಾಣ್, ಅಪ್ನಾದಳ್-ಎಸ್ ನಾಯಕಿ ಅನುಪ್ರಿಯಾ ಪಟೇಲ್ ಮತ್ತು ಜೆಡಿಎಸ್ ನಾಯಕ ಎಚ್.ಡಿ.ಕುಮಾರಸ್ವಾಮಿ ಸೂಚನೆಗೆ ಬೆಂಬಲ ವ್ಯಕ್ತಪಡಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ನರೇಂದ್ರ ಮೋದಿ, ಹಲವು ಪಕ್ಷಗಳನ್ನೊಳಗೊಂಡ ಎನ್‌ಡಿಎ ಮೈತ್ರಿಕೂಟ, ಅಧಿಕಾರಕ್ಕಾಗಿ ರಚನೆಯಾದ ಒಕ್ಕೂಟವಲ್ಲ. ದೇಶ ಮೊದಲು ಎಂಬ ಸ್ಫೂರ್ತಿಯೊಂದಿಗೆ ಕೆಲಸ ಮಾಡಲು ಒಕ್ಕೂಟ ಬದ್ಧವಾಗಿದೆ ಎಂದು ಹೇಳಿದರು. ಭಾರತದ ಇತಿಹಾಸದಲ್ಲಿ ಎನ್‌ಡಿಎ ಅತ್ಯಂತ ಯಶಸ್ವಿ ಮೈತ್ರಿಕೂಟವಾಗಿದೆ ಮತ್ತು ಎಲ್ಲ ನಿರ್ಧಾರಗಳನ್ನು ಒಟ್ಟಾಗಿ ಕೈಗೊಳ್ಳುವುದು ನಮ್ಮೆಲ್ಲರ ಗುರಿಯಾಗಿರುತ್ತದೆ. ದೇಶದ ಜನತೆ ಇಂದು ೨೨ ರಾಜ್ಯಗಳಲ್ಲಿ ಸರ್ಕಾರ ರಚನೆಗೆ ಎನ್‌ಡಿಎಗೆ ಅವಕಾಶ ಮಾಡಿಕೊಟ್ಟಿದೆ ಎಂದರು. ಕಳೆದ ಹತ್ತು ವರ್ಷಗಳಲ್ಲಿ ದೇಶವನ್ನು ಅಭಿವೃದ್ಧಿಯಲ್ಲಿ ಹೊಸ ಎತ್ತರಕ್ಕೆ ಕೊಂಡೊಯ್ಯಲು ಎನ್‌ಡಿಎ ಶ್ರಮಿಸಿದೆ. ಉತ್ತಮ ಆಡಳಿತ ನೀಡಲು ಎನ್‌ಡಿಎ ಮೈತ್ರಿಕೂಟದ ಎಲ್ಲ ನಾಯಕರು ಆಧಾರಸ್ತಂಭವಾಗಿ ನಿಂತಿದ್ದಾರೆ ಎಂದು ನರೇಂದ್ರ ಮೋದಿ ಹೇಳಿದರು. ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ.ನಡ್ಡಾ ಮಾತನಾಡಿ, ಲೋಕಸಭಾ ಚುನಾವಣೆಯಲ್ಲಿ ಎನ್‌ಡಿಎ, ಸತತ ಮೂರನೇ ಬಾರಿಗೆ ಬಹುಮತ ಗಳಿಸಿದೆ. ಒಡಿಶಾ ಮತ್ತು ಆಂಧ್ರಪ್ರದೇಶದಲ್ಲೂ ಬಿಜೆಪಿ ಗೆಲುವು ಸಾಧಿಸಿದ್ದು, ಮೆಚ್ಚುಗೆಯ ವಿಚಾರವಾಗಿದೆ ಎಂದು ಹೇಳಿದರು. ಸಭೆಯಲ್ಲಿ ಆರ್‌ಎಲ್‌ಡಿ ಮುಖ್ಯಸ್ಥ ಜಯಂತ್ ಚೌಧರಿ, ಕೇಂದ್ರ ಸಚಿವರಾದ ಪಿಯುಶ್ ಗೋಯಲ್ ಮತ್ತು ಅನುರಾಗ್ ಸಿಂಗ್ ಠಾಕೂರ್ ಸೇರಿದಂತೆ ಅನೇಕ ಸಚಿವರು ಉಪಸ್ಥಿತರಿದ್ದರು. ಅಲ್ಲದೇ ಉತ್ತರ ಪ್ರದೇಶ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್, ಗುಜರಾತ್ ಮುಖ್ಯಮಂತ್ರಿ ಭೂಪೇಂದ್ರ ಪಟೇಲ್, ಮಧ್ಯಪ್ರದೇಶ ಮುಖ್ಯಮಂತ್ರಿ ಮೋಹನ್ ಯಾದವ್, ಗೋವಾ ಮುಖ್ಯಮಂತ್ರಿ ಪ್ರಮೋದ್ ಸಾವಂತ್, ಅಸ್ಸಾಂ ಮುಖ್ಯಮಂತ್ರಿ ಹಿಮಂತ್ ಬಿಸ್ವ ಶರ್ಮಾ, ಮಣಿಪುರ ಮುಖ್ಯಮಂತ್ರಿ ಬೀರೇನ್

ಸಿಂಗ್ ಸಭೆಯಲ್ಲಿ ಪಾಲ್ಗೊಂಡಿದ್ದರು.ಎನ್‌ಡಿಎ ಮೈತ್ರಿಕೂಟದ ನಾಯಕರಾಗಿ ಆಯ್ಕೆಯಾದ ನಂತರ ಪ್ರಧಾನಿ ನರೇಂದ್ರ ಮೋದಿ ಅವರು, ಬಿಜೆಪಿ ಹಿರಿಯ ನಾಯಕರಾದ ಎಲ್.ಕೆ.ಅಡ್ವಾಣಿ ಮತ್ತು ಡಾ.ಮುರಳಿ ಮನೋಹರ ಜೋಶಿ ಅವರನ್ನು ಭೇಟಿ ಮಾಡಿ ಆಶೀರ್ವಾದ ಪಡೆದರು. ನಂತರ ಮೋದಿ ಅವರು, ಮಾಜಿ ರಾಷ್ಟ್ರಪತಿ ರಾಮನಾಥ್ ಕೋವಿಂದ್ ಅವರ ದೆಹಲಿ ನಿವಾಸಕ್ಕೆ ಭೇಟಿ ನೀಡಿ ಮಾತುಕತೆ ನಡೆಸಿದರು.

*****

ಭಾರತೀಯ ರಿಸರ್ವ್ ಬ್ಯಾಂಕ್ - ಆರ್‌ಬಿಐನ ಹಣಕಾಸು ನೀತಿ ಸಮಿತಿ, ಪ್ರಸಕ್ತ ತ್ರೈಮಾಸಿಕ ದರ ಪ್ರಕಟಿಸಿದೆ. ರೆಪೋ ದರದಲ್ಲಿ ಯಾವುದೇ ಬದಲಾವಣೆ ಮಾಡದಿರಲು ಆರ್‌ಬಿಐ ನಿರ್ಧರಿಸಿದೆ. ರೆಪೋ ದರವನ್ನು ೬.೫ ರಲ್ಲಿಯೇ ಮುಂದುವರಿಯಲಿದೆ ಎಂದು ಆರ್ ಬಿಐ ಗವರ್ನರ್ ಶಕ್ತಿಕಾಂತ್ ದಾಸ್ ತಿಳಿಸಿದ್ದಾರೆ. ೨೦೨೪-೨೫ನೇ ಆರ್ಥಿಕ ವರ್ಷದಲ್ಲಿ ದೇಶದ ಜಿಡಿಪಿ ಬೆಳವಣಿಗೆ ದರ ಶೇಕಡ ೭ ರಿಂದ ಶೇಕಡ ೭.೨ ರಷ್ಟು ಏರಿಕೆಯಾಗಲಿದೆ ಎಂದು ಅಂದಾಜಿಸಲಾಗಿದೆ. ಹಣದುಬ್ಬರವು ಶೇ.೪.೫ ರಷ್ಟು ಇರಲಿದೆ. ವಿಶ್ವ ರಾಜಕೀಯ ಬಿಕ್ಕಟ್ಟಿನಿಂದಾಗಿ, ಕಚ್ಚಾ ತೈಲ ಬೆಲೆಯಲ್ಲಿ ಅನಿಶ್ಚಿತತೆ ಇರಲಿದೆ ಎಂದು ಅವರು ತಿಳಿಸಿದರು.

*****

ಉದ್ಯೋಗಕ್ಕಾಗಿ ಜಮೀನು ಹಗರಣದಲ್ಲಿ ಕೇಂದ್ರ ಮಾಜಿ ಸಚಿವ ಲಾಲು ಪ್ರಸಾದ್ ಯಾದವ್, ಅವರ ಕುಟುಂಬದವರು ಮತ್ತು ಇತರರ ವಿರುದ್ಧ ವಿಶೇಷ ನ್ಯಾಯಾಲಯಕ್ಕೆ ಸಿಬಿಐ ಅಂತಿಮ ಆರೋಪ ಪಟ್ಟಿ ಸಲ್ಲಿಸಿದೆ. ಆರೋಪ ಪಟ್ಟಿಯನ್ನು ಸ್ವೀಕರಿಸಿರುವ ನ್ಯಾಯಾಲಯ ಮುಂದಿನ ವಿಚಾರಣೆಯನ್ನು ಜುಲೈ ೬ಕ್ಕೆ ನಿಗದಿಪಡಿಸಿದೆ. ಇದೇ ಹಗರಣಕ್ಕೆ ಸಂಬಂಧಿಸಿದಂತೆ ೨೦೨೩ರ ಅಕ್ಟೋಬರ್ ೪ರಂದು ಲಾಲು ಪ್ರಸಾದ್ ಯಾದವ್ ಪತ್ನಿ ರಾಬ್ರಿ ದೇವಿ ಮತ್ತು ಪುತ್ರ ತೇಜಸ್ವಿ ಯಾದವ್ ಅವರಿಗೆ ನ್ಯಾಯಾಲಯ ಜಾಮೀನು ನೀಡಿತ್ತು.

*****

ಛತ್ತೀಸ್‌ಗಢದ ನಾರಾಯಣಪುರ, ದಂತೇವಾಡ ಜಿಲ್ಲೆಗಳ ಗಡಿಯ ಬಸ್ತಾರ್‌ನಲ್ಲಿ ಭದ್ರತಾ ಪಡೆಗಳು ನಿನ್ನೆ ನಡೆಸಿದ ಕಾರ್ಯಾಚರಣೆಯಲ್ಲಿ ಐವರು ಮಾವೋವಾದಿಗಳು ಹತರಾಗಿದ್ದಾರೆ.

ಕಾರ್ಯಾಚರಣೆಯಲ್ಲಿ ಮೂವರು ಪೊಲೀಸ್ ಸಿಬ್ಬಂದಿಗೆ ಗಾಯಗಳಾಗಿವೆ. ಬಸ್ತಾರ್ ಪೊಲೀಸ್ ಠಾಣೆ ವ್ಯಾಪ್ತಿಯ ಅರಣ್ಯದಲ್ಲಿ ಮಾವೋವಾದಿಗಳು ಅಡಗಿರುವ ಕುರಿತು ಖಚಿತ ಮಾಹಿತಿ ಮೇರೆಗೆ ಇಂಡೋ-ಟಿಬೇಟಿಯನ್ ಗಡಿ ಪೊಲೀಸ್ ಮತ್ತು ಜಿಲ್ಲಾ ಮೀಸಲು ಪೊಲೀಸ್ ಪಡೆ ಜಂಟಿ ಕಾರ್ಯಾಚರಣೆ ನಡೆಸಿತು.

*****

ಯೋಗ ಕುರಿತು ಜನರಲ್ಲಿ ಜಾಗೃತಿ ಮೂಡಿಸಲು ಕೇಂದ್ರ ವಾರ್ತಾ ಪ್ರಸಾರ ಸಚಿವಾಲಯ ಹಲವು ಬಗೆಯ ಕಾರ್ಯಕ್ರಮಗಳನ್ನು ಆಯೋಜಿಸಲು ಉದ್ದೇಶಿಸಿದೆ. ಸಾಮಾನ್ಯ ಯೋಗ ಶಿಷ್ಟಾಚಾರದ ಜೊತೆಗೆ ಯೋಗಾಭ್ಯಾಸ ಮಾಡುವುದರಿಂದ ದೊರೆಯುವ ಪ್ರಯೋಜನಗಳೇನು ಎಂಬ ಬಗ್ಗೆಯೂ ಅರಿವು ಮೂಡಿಸಲು ಸಚಿವಾಲಯ ಮುಂದಾಗಿದೆ. ಜೂನ್ ೨೧ ರಂದು ನವದೆಹಲಿಯಲ್ಲಿ ನಡೆಯಲಿರುವ ೨೦೨೪ರ ಅಂತಾರಾಷ್ಟ್ರೀಯ ಯೋಗ ದಿನಾಚರಣೆಗೆ ಪೂರ್ವ ಸಿದ್ಧತೆಗಳ ಕುರಿತು ವಾರ್ತಾ ಹಾಗೂ ಪ್ರಸಾರ ಸಚಿವಾಲಯದ ಕಾರ್ಯದರ್ಶಿ ಸಂಜಯ್ ಜಜು ಹಾಗೂ ಆಯುಷ್ ಸಚಿವಾಲಯದ ಕಾರ್ಯದರ್ಶಿ ವೈದ್ಯ ರಾಜೇಶ್ ಕೊಟೆಚ್ಚಾ ಪರಿಶೀಲಿಸಿದರು

*****

೧೮ನೇ ಮುಂಬೈ ಅಂತಾರಾಷ್ಟ್ರೀಯ ಚಲನಚಿತ್ರೋತ್ಸವ ಈ ತಿಂಗಳ ೧೫ ರಿಂದ ೨೧ರವರೆಗೆ ಮುಂಬೈನಲ್ಲಿ ನಡೆಯಲಿದೆ. ಈ ಕುರಿತು ನವದೆಹಲಿಯಲ್ಲಿ ಮಾಹಿತಿ ನೀಡಿದ ವಾರ್ತಾ ಹಾಗೂ ಪ್ರಸಾರ ಸಚಿವಾಲಯ ಕಾರ್ಯದರ್ಶಿ ಸಂಜಯ್ ಜಜು, ಉತ್ಸವದ ಅಂಗವಾಗಿ ದೆಹಲಿ, ಚೆನ್ನೈ, ಪುಣೆ ಹಾಗೂ ಕೊಲ್ಕೊತ್ತಾದಲ್ಲಿ ಚಲನಚಿತ್ರಗಳ ಪ್ರದರ್ಶನಗಳು ನಡೆಯಲಿವೆ ಎಂದು ಹೇಳಿದರು. ಉತ್ಸವದ ಸಂದರ್ಭದಲ್ಲಿ ೫೯ ದೇಶಗಳ ೩೧೪ ಚಲನಚಿತ್ರಗಳ ಪ್ರದರ್ಶನ ನಡೆಯಲಿದೆ. ’ಅಮೃತ ಕಾಲದಲ್ಲಿ ಭಾರತ’ ಈ ಉತ್ಸವದ ವಿಶೇಷ ಧ್ಯೇಯ ವಾಕ್ಯವಾಗಿದೆ. ಜಪಾನ್, ರಷ್ಯಾ, ಬೆಲಾರಸ್, ಇರಾನ್, ಇಟಲಿ, ವಿಯಟ್ನಾಮ್ ಮತ್ತು ಮಾಲಿ ದೇಶಗಳ ಒಟ್ಟು ೧೭ ಚಲನಚಿತ್ರಗಳನ್ನು ಪ್ರದರ್ಶಿಸಲಾಗುವುದು.

*****

ಪ್ಯಾರಿಸ್‌ನಲ್ಲಿ ನಿನ್ನೆ ನಡೆದ ಫ್ರೆಂಚ್ ಓಪನ್ ಟೆನಿಸ್ ಪಂದ್ಯಾವಳಿಯ ಪುರುಷರ ಸಿಂಗಲ್ಸ್ ವಿಭಾಗದ ಸೆಮಿಫೈನಲ್ ಪಂದ್ಯದಲ್ಲಿ ಸ್ಪೇನ್‌ನ ಕಾರ್ಲೋಸ್ ಅಲ್ಕರಾಜ್ ಅವರು ಇಟಲಿಯ ಜಾನಿಕ್ ಸಿನ್ನರ್ ಅವರನ್ನು ೨-೬, ೬-೩, ೩-೬, ೬-೪ ಮತ್ತು ೬-೩ ಸೆಟ್‌ಗಳಿಂದ ಪರಾಭವಗೊಳಿಸಿದ್ದಾರೆ. ನಿನ್ನೆ ನಡೆದ ಮತ್ತೊಂದು ಸೆಮಿಫೈನಲ್ ಪಂದ್ಯದಲ್ಲಿ ನಾರ್ವೆಯ ಕ್ಯಾಸ್ಪರ್ ರೂಡ್ ಅವರನ್ನು ಜರ್ಮನಿಯ ಅಲೆಗ್ಸಾಂಡರ್ ಜ್ವೆರೆವ್ ಅವರು ೬-೨, ೨-೬, ೪-೬ ಮತ್ತು ೨-೬ ಸೆಟ್‌ಗಳಿಂದ ಮಣಿಸಿದ್ದಾರೆ. ಭಾನುವಾರ ನಡೆಯಲಿರುವ ಫೈನಲ್ ಪಂದ್ಯದಲ್ಲಿ ಕಾರ್ಲೋಸ್ ಅಲ್ಕರಾಜ್ ಮತ್ತು ಅಲೆಗ್ಸಾಂಡರ್ ಜ್ವೆರೆವ್ ಮುಖಾಮುಖಿಯಾಗಲಿದ್ದಾರೆ. ಇಂದು ನಡೆಯಲಿರುವ ಮಹಿಳೆಯರ ಸಿಂಗಲ್ಸ್ ವಿಭಾಗದ ಫೈನಲ್ಸ್ ಪಂದ್ಯದಲ್ಲಿ ಪೋಲೆಂಡ್‌ನ ಇಗಾ ಸ್ವಿಯಾಟೆಕ್ ಅವರು ಇಟಲಿಯ ಜಾಸ್ಮಿನ್ ಪಯೋಲಿನಿ ಅವರನ್ನು ಎದುರಿಸಲಿದ್ದಾರೆ.

*****

ಟಿ-೨೦ ವಿಶ್ವಕಪ್ ಪಂದ್ಯಾವಳಿಯ 'ಎ' ಗುಂಪಿನ ಪಂದ್ಯದಲ್ಲಿ ಕೆನಡಾ ತಂಡವು ಐರ್ಲೆಂಡ್ ತಂಡವನ್ನು ೧೨ ರನ್‌ಗಳಿಂದ ಮಣಿಸಿದೆ. ನ್ಯೂಯಾರ್ಕ್‌ನಲ್ಲಿ ನಿನ್ನೆ ರಾತ್ರಿ ನಡೆದ ಪಂದ್ಯದಲ್ಲಿ ಮೊದಲು ಬ್ಯಾಟಿಂಗ್ ಮಾಡಿದ ಕೆನಡಾ ತಂಡವು ೭ ವಿಕೆಟ್ ನಷ್ಟಕ್ಕೆ ೧೩೭ ರನ್‌ಗಳಿಸಿತು. ಕೆನಡಾ ಪರವಾಗಿ ನಿಕೋಲಸ್ ಕಿರ್ಟನ್ ಅತ್ಯಧಿಕ ೪೯ ರನ್ ಮತ್ತು ಶ್ರೇಯಸ್ ಮೊವ್ವಾ ೩೭ ರನ್ ಗಳಿಸಿದರು. ೧೩೮ ರನ್‌ಗಳ ಗುರಿ ಬೆನ್ನತ್ತಿದ ಐರ್ಲೆಂಡ್ ತಂಡ, ೨೦ ಓವರ್‌ಗಳಲ್ಲಿ ೭ ವಿಕೆಟ್ ನಷ್ಟಕ್ಕೆ ೧೨೫ ರನ್ ಗಳಿಸಲಷ್ಟೇ ಶಕ್ತವಾಯಿತು. ನಿಕೋಲಸ್ ಕಿರ್ಟನ್ ಪಂದ್ಯಶ್ರೇಷ್ಠ ಗೌರವಕ್ಕೆ ಪಾತ್ರರಾದರು. ಇಂದು ನಡೆಯುತ್ತಿರುವ ಡಿ ಗುಂಪಿನ ಪಂದ್ಯದಲ್ಲಿ ಶ್ರೀಲಂಕಾ ಮತ್ತು ಬಾಂಗ್ಲಾದೇಶ ಮುಖಾಮುಖಿಯಾಗಿವೆ. ಟಾಸ್ ಗೆದ್ದಿರುವ ಬಾಂಗ್ಲಾದೇಶ ಫೀಲ್ಡಿಂಗ್ ಆಯ್ದುಕೊಂಡಿದೆ. ಇಂದು ನಡೆಯುತ್ತಿರುವ ಸಿ ಗುಂಪಿನ ಮತ್ತೊಂದು ಪಂದ್ಯ ಅಫ್ಘಾನಿಸ್ತಾನ ಮತ್ತು ನ್ಯೂಜಿಲೆಂಡ್ ನಡುವೆ ನಡೆಯುತ್ತಿದೆ. ಟಾಸ್ ಗೆದ್ದಿರುವ ನ್ಯೂಜಿಲೆಂಡ್ ಫೀಲ್ಡಿಂಗ್ ಆಯ್ದುಕೊಂಡಿದೆ.

**END***